**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ನ್ನು ಜಾರಿಗೆ ತರಲು ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 135 ಟಿಡಿಬಿ 2020, ದಿನಾಂಕ:18..09.2020
2. ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 135 ಟಿಡಿಬಿ 2020, ದಿನಾಂಕ: 28.09.2021
3. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆರವರ ಏಕಕಡತ ಸಂಖ್ಯೆ:DT-PMU4/5/2024-KTVG-DIRECTORATE OF TOURISM.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಆದೇಶದಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ನ್ನು ಅನುಬಂಧದಂತೆ ರೂಪಿಸಿ, ಸದರಿ ನೀತಿಯಲ್ಲಿ ಅಳವಡಿಸಲಾಗಿರುವ ಪ್ರೋತ್ಸಾಹಧನ, ರಿಯಾಯಿತಿ ಮತ್ತು ಸಬ್ಸಿಡಿಗಳೊಂದಿಗೆ ಜಾರಿಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ(2)ರಲ್ಲಿ ಓದಲಾದ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 135 ಟಿಡಿಬಿ 2020, ದಿನಾಂಕ: 18-09-2020ರಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2020-25ನ್ನು ಸದರಿ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಂತೆ ರೂಪಿಸಿ, ಸದರಿ ನೀತಿಯಲ್ಲಿ ಅಳವಡಿಸಲಾಗಿರುವ ಪ್ರೋತ್ಸಾಹಧನ, ರಿಯಾಯಿತಿ ಮತ್ತು ಸಬ್ಸಿಡಿಗಳೊಂದಿಗೆ ಜಾರಿಗೊಳಿಸಲು ಸರ್ಕಾರದ ಅನುಮೋದನೆ ನೀಡಲಾಗಿದ್ದು, ಸದರಿ ಆದೇಶಕ್ಕೆ ಅನುಬಂಧದಂತೆ ತಿದ್ದುಪಡಿಯನ್ನು ತರಲು ಪರಿಷ್ಕೃತ ಅನುಮೋದನೆ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ(3)ರಲ್ಲಿ ಓದಲಾದ ಇ-ಏಕಕಡತದಲ್ಲಿ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆರವರು 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 371ರಲ್ಲಿ 'ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದಲ್ಲಿನ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕರ್ನಾಟಕ ಪ್ರವಾಸೋದ್ಯಮ ನೀತಿಯನ್ನು ಮತ್ತಷ್ಟು ಹೂಡಿಕೆದಾರರ ಹಾಗೂ ಪ್ರವಾಸಿಗರ ಸ್ನೇಹಿಯಾಗಿ ಮಾಡಲು, ಪರಿಷ್ಕೃತ ಪ್ರವಾಸೋದ್ಯಮ ನೀತಿ 2024-29 ಅನ್ನು ಜಾರಿಗೆ ತರಲಾಗುವುದು" ಎಂಬುದಾಗಿ ಘೋಷಿಸಲಾಗಿರುವಂತೆ ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದಲ್ಲಿನ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಪ್ರಸ್ತುತ ಜಾರಿಯಲ್ಲಿರುವ ಕರ್ನಾಟಕ ಪ್ರವಾಸೋದ್ಯಮ ನೀತಿಯನ್ನು ಮತ್ತಷ್ಟು ಹೂಡಿಕೆದಾರರ ಹಾಗೂ ಪ್ರವಾಸಿಗರ ಸ್ನೇಹಿಯಾಗಿ ಮಾಡಲು, ಸಿದ್ಧಪಡಿಸಿಕೊಂಡಿರುವ ಕರಡು ಪ್ರವಾಸೋದ್ಯಮ ನೀತಿ 2024-29ಕ್ಕೆ ಅನುಮೋದನೆಯನ್ನು ಕೋರಿರುತ್ತಾರೆ.

ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಕರ್ನಾಟಕ ಪ್ರವಾಸೋದ್ಯಮ ಕ್ಷೇತ್ರವನ್ನು ಅತ್ಯಂತ ಆದ್ಯತೆಯ, ಉತ್ಸಾಹದಾಯಕ ಮತ್ತು ಪುಷ್ಟೀಕರಿಸಿದ ಪ್ರವಾಸೋದ್ಯಮ ತಾಣವಾಗಿ ಅಭಿವೃದ್ಧಿಪಡಿಸಲು, ಪ್ರವಾಸಿಗರ ಒಗ್ಗೂಡುವಿಕೆಯಿಂದ ಸಮಾಜದ ಎಲ್ಲಾ ವರ್ಗಗಳು ಸಮೃದ್ಧಿ, ಉತ್ತೇಜನ, ಸ್ಮರಣೀಯ ಅನುಭವಗಳನ್ನು, ಜ್ಞಾನ, ವಿಶ್ರಾಂತಿ ಮತ್ತು ಮನ:ಶಾಂತಿಯನ್ನು ನೀಡುತ್ತದೆ. ಶಾಲಾ ಮಕ್ಕಳು, ಯುವಕರು, ಮಹಿಳೆಯರು ಮತ್ತು ಹಿರಿಯ ನಾಗರಿಕರು ಆಧ್ಯಾತ್ಮಿಕ, ವಿರಾಮ, ವಿನೋದ ಮತ್ತು ಬೌದ್ಧಿಕ ಸೇರಿದಂತೆ ಇತರೆ ಎಲ್ಲಾ ಅಭಿವ್ಯಕ್ತಿಗಳಲ್ಲಿ ತಮ್ಮ ಪ್ರಯಾಣ, ಕಲಿಕೆ ಮತ್ತು ಅನುಭವಗಳ ದಾಹವನ್ನು ನೀಗಿಸಲು ಸಮಗ್ರವಾಗಿ ಸಕ್ರಿಯಗೊಳಿಸುವ ಪ್ಯಾಕೇಜ್‌ಗಳನ್ನು ಒದಗಿಸಲು ಅವಕಾಶವನ್ನು ಕಲ್ಪಿಸುತ್ತದೆ ಹಾಗೂ ಸೂಕ್ತವಾದ ಪ್ರವಾಸೋದ್ಯಮ ವಾತಾವರಣವನ್ನು ಒದಗಿಸುವ ಮೂಲಕ ಸಮಾಜದ ಎಲ್ಲಾ ವರ್ಗಗಳಿಗೆ ಮತ್ತು ರಾಜ್ಯದ, ದೇಶದ ಮತ್ತು ವಿದೇಶಿ ಪ್ರವಾಸಿಗರನ್ನು ತಲುಪಲು ಸಹಕಾರಿಯಾಗಿರುತ್ತದೆ.

2023ನೇ ಸಾಲಿನಲ್ಲಿ ರಾಜ್ಯದ ಕರಾವಳಿ ಪ್ರವಾಸಿ ತಾಣಗಳಿಗೆ 8 ಕೋಟಿಗೂ ಹೆಚ್ಚಿನ ಪ್ರವಾಸಿಗರು ಭೇಟಿ ನೀಡಿರುತ್ತಾರೆ. ಕರ್ನಾಟಕಕ್ಕೆ ಭೇಟಿ ನೀಡುವ ಒಟ್ಟು ಪ್ರವಾಸಿಗರಲ್ಲಿ ಕರಾವಳಿ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆ ಶೇ.12-15% ಆಗಿರುತ್ತದೆ. ಹಾಗಾಗಿ, ರಾಜ್ಯದಲ್ಲಿ ಕರಾವಳಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಅಪಾರ ಅವಕಾಶವಿರುತ್ತದೆ.

ಕರಾವಳಿ ಪ್ರವಾಸೋದ್ಯಮಕ್ಕೆ ಈ ನೀತಿಯ ಅವಧಿಯಲ್ಲಿ ವಿಶೇಷ ಒತ್ತು ನೀಡಲು ಮತ್ತು ಜವಾಬ್ದಾರಿಯುತ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾದ ವಿಶ್ವದರ್ಜೆಯ ಸೌಲಭ್ಯಗಳೊಂದಿಗೆ ಕರಾವಳಿ ಕರ್ನಾಟಕವನ್ನು ಉತ್ತಮ ಗುಣಮಟ್ಟದ ತಾಣವಾಗಿ ಸುಸ್ಥಿರವಾಗಿ ಅಭಿವೃದ್ಧಿಪಡಿಸಲಾಗುವುದು. ರಾಜ್ಯದ ಸಂಪೂರ್ಣ 320 ಕಿಮೀ ಕರಾವಳಿಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಯನ್ನು ಕೈಗೊಳ್ಳಲು ಕರ್ನಾಟಕ ಸರ್ಕಾರವು ಉದ್ದೇಶಿಸಿದೆ. ಕರಾವಳಿ ಕರ್ನಾಟಕದ ಪ್ರವಾಸೋದ್ಯಮ ಅಭಿವೃದ್ಧಿಗೆ ಅಗತ್ಯ ಒತ್ತು ನೀಡಲು ವಿಶೇಷ ಆರ್ಥಿಕ ಪ್ಯಾಕೇಜ್ ರಚಿಸಲಾಗುವುದು.

ರಾಜ್ಯದಲ್ಲಿ ಪ್ರವಾಸೋದ್ಯಮ ಪರಿಸರ ವ್ಯವಸ್ಥೆಯನ್ನು ಹೆಚ್ಚಿಸಲು ಶಕ್ತಿ ಯೋಜನೆ ಮತ್ತು ಯುವ ನಿಧಿಯಂತಹ ಸರ್ಕಾರಿ ಕಾರ್ಯಕ್ರಮಗಳ ಯಶಸ್ಸಿನ ಮೇಲೆ ನೀತಿಯನ್ನು ರಚಿಸಲಾಗಿದೆ. ಈ ನೀತಿಯು ಕರ್ನಾಟಕದಲ್ಲಿ ಸುಸ್ಥಿರ ಪ್ರವಾಸೋದ್ಯಮ ಪರಿಸರ ವ್ಯವಸ್ಥೆಯನ್ನು ರಚಿಸಲು ಶ್ರಮಿಸುತ್ತದೆ ಮತ್ತು ಪ್ರವಾಸಿಗರಿಗೆ ಸುರಕ್ಷಿತ ಮತ್ತು ಉತ್ತಮ-ಗುಣಮಟ್ಟದ ಅನುಭವವನ್ನು ನೀಡುತ್ತದೆ.

ಪ್ರವಾಸೋದ್ಯಮಕ್ಕೆ ಮತ್ತು ಪ್ರವಾಸಿಗರಿಗೆ ಅನುಕೂಲವಾಗಲು ಕರ್ನಾಟಕದ ಎಲ್ಲಾ ಹೆಲಿಟೂರಿಸಂ ಸ್ಥಳಗಳಿಗೆ ರೋಪ್‌ವೇ / ಕೇಬಲ್‌ಕಾರ್‌ಗಳನ್ನು ಒದಗಿಸಲು ಕರ್ನಾಟಕದಲ್ಲಿ ರೋಪ್‌ವೇಗಳ ಸ್ಥಾಪನೆ, ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಅನುಕೂಲವಾಗುವಂತೆ ಶಾಸನವನ್ನು ಜಾರಿಗೊಳಿಸಲಾಗುವುದು.

ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಅನ್ನು ಜಾರಿಗೊಳಿಸುವುದರಿಂದ, ದೇಶೀಯ ಮತ್ತು ಅಂತರಾಷ್ಟ್ರೀಯ ಪ್ರವಾಸಿಗರಿಗೆ ಉತ್ತಮ ಗುಣಮಟ್ಟದ ಅನುಭವವನ್ನು ನೀಡುವ ಮೂಲಕ, ಪ್ರವಾಸಿಗರ ಸಂಖ್ಯೆಯಲ್ಲಿ ಹೆಚ್ಚಳವಾಗುವುದಲ್ಲದೆ, ಹೂಡಿಕೆಗಳಿಗೆ ಅನುಕೂಲವಾಗುತ್ತದೆ ಮತ್ತು ಹೂಡಿಕೆಯ ವೇಗವನ್ನು ಹೆಚ್ಚಿಸುತ್ತದೆ.

ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ನ್ನು ಉದ್ದೇಶಗಳು, ಗುರಿಗಳು, ಪ್ರೋತ್ಸಾಹಕಗಳು, ಸಹಾಯಧನ ಮತ್ತು ರಿಯಾಯಿತಿಗಳೊಂದಿಗೆ ಜಾರಿಗೊಳಿಸಲು ಉದ್ದೇಶಿಸಲಾಗಿದೆ ಹಾಗೂ ಪ್ರವಾಸೋದ್ಯಮ ಕ್ಷೇತ್ರದಲ್ಲಿ ವಿವಿಧ ಹೂಡಿಕೆ, ಸೇವಾ ವರ್ಗಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರದಿಂದ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸುವ ಅಗತ್ಯವಿರುತ್ತದೆ. ಸದರಿ ಮಾರ್ಗಸೂಚಿಗಳನ್ನು ಅನುಸರಣೆ ಮಾಡುವ ಅರ್ಹರಿಗೆ ಬಂಡವಾಳ ಸಹಾಯಧನ ಮತ್ತು ರಿಯಾಯಿತಿಗಳನ್ನು ಈ ನೀತಿಯಲ್ಲಿ ನೀಡಲಾಗಿದೆ.

ಮೇಲಿನ ಅಂಶಗಳನ್ನು/ವಿವರಗಳನ್ನು ಪ್ರವಾಸೋದ್ಯಮ ನೀತಿಯಲ್ಲಿ ಅಳವಡಿಸಿ ಪ್ರವಾಸೋದ್ಯಮ ನೀತಿ 2024-29 ಅನ್ನು ಪ್ರಕಟಿಸಲು ಸರ್ಕಾರವು ತೀರ್ಮಾನಿಸಿದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಟಿಒಆರ್ 78 ಟಿಡಿಪಿ 2024,**
**ಬೆಂಗಳೂರು, ದಿನಾಂಕ:07-11-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಅನ್ನು ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಂತೆ ರೂಪಿಸಿ, ಸದರಿ ನೀತಿಯಲ್ಲಿ ಅಳವಡಿಸಲಾಗಿರುವ ಪ್ರೋತ್ಸಾಹಕಗಳು, ರಿಯಾಯಿತಿ ಮತ್ತು ಸಹಾಯಧನಗಳೊಂದಿಗೆ ಜಾರಿಗೊಳಿಸಲು ಹಾಗೂ ಈ ನೀತಿಯ ಅಡಿಯಲ್ಲಿ ಪ್ರೋತ್ಸಾಹಕಗಳು, ಸಹಾಯಧನ ಮತ್ತು ರಿಯಾಯಿತಿಗಳಿಗೆ ರೂ.1349.10 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲು ಅನುಮೋದನೆ ನೀಡಲಾಗಿದೆ.

..3..

ಕರ್ನಾಟಕ ಪ್ರವಾಸೋದ್ಯಮ ನೀತಿ 2024-29 ಈ ಆದೇಶ ಜಾರಿಗೆ ಬಂದ ದಿನಾಂಕದಿಂದ 05 ವರ್ಷಗಳ ಅವಧಿಗೆ ಜಾರಿಯಲ್ಲಿರುತ್ತದೆ.

ಅನುಬಂಧದಲ್ಲಿರುವ ಪ್ರವಾಸೋದ್ಯಮ ಯೋಜನೆಗಳ ಅಭಿವೃದ್ಧಿಗೆ ಪೂರಕವಾಗಿ ಪ್ರವಾಸೋದ್ಯಮ ಕ್ಷೇತ್ರದಲ್ಲಿನ ವಿವಿಧ ಹೂಡಿಕೆ, ಸೇವಾವರ್ಗಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರದಿಂದ ಪ್ರತ್ಯೇಕ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು.

ಪ್ರವಾಸೋದ್ಯಮ ನೀತಿಯನ್ವಯ ಲಭ್ಯವಾಗುವ ವಿವಿಧ ಪ್ರೋತ್ಸಾಹಕಗಳು, ರಿಯಾಯಿತಿ ಮತ್ತು ಸಹಾಯಧನ ಕುರಿತು ಕಾರ್ಯಾಚರಣೆ ಮಾರ್ಗಸೂಚಿಗಳನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ರಲ್ಲಿ ಪ್ರವಾಸೋದ್ಯಮಕ್ಕೆ ಅನ್ವಯಿಸಿದ ಯೋಜನೆಗಳಿಗೆ ಸಂಬಂಧಿಸಿದಂತೆ ಇತರೆ ಇಲಾಖೆಗಳಿಂದ ನೀಡಲಾಗುವ ಸೌಲಭ್ಯ ಬೆಂಬಲ ಮತ್ತು ರಿಯಾಯಿತಿಗಳು ಹಾಗೂ ಮಾರ್ಗಸೂಚಿಗಳ ಕುರಿತು ಸಂಬಂಧಿಸಿದ ಇಲಾಖೆಗಳು ಪ್ರತ್ಯೇಕ ಆದೇಶಗಳನ್ನು ಹೊರಡಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Mdeha 27/11/24

**(ಮುಹಮ್ಮದ್ ಇಬ್ರಾಹಿಂ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಪ್ರವಾಸೋದ್ಯಮ ಇಲಾಖೆ.

27/11/24

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ರವರಿಗೆ ಇ-ರಾಜ್ಯ ಪತ್ರದಲ್ಲಿ ಪ್ರಕಟಿಸಲು.

**ಪ್ರತಿ:**

1. ಮಹಾಲೇಖಪಾಲರು(ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
3. ಅಧ್ಯಕ್ಷರು, ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ಟಾಸ್ಕ್ ಫೋರ್ಸ್, ಬೆಂಗಳೂರು.
4. ಎಲ್ಲಾ ಪ್ರಾದೇಶಿಕ ಆಯುಕ್ತರು.
5. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಎಂಬೆಸ್ಸಿ ಐಕಾನ್ ಕಟ್ಟಡ, ಬೆಂಗಳೂರು.
6. ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ.
7. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪ್ರವಾಸೋದ್ಯಮ ಮೂಲಸೌಲಭ್ಯ ನಿಗಮ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆ, ಬೆಂಗಳೂರು.
11. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ, ಮೈಸೂರು.
12. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ, ಬೆಂಗಳೂರು.
13. ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
14. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ.
15. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಕೆ.ಆರ್. ವೃತ್ತ, ಬೆಂಗಳೂರು.
16. ಅಧ್ಯಕ್ಷರು, ಕರ್ನಾಟಕ ಪ್ರವಾಸೋದ್ಯಮ ಸೊಸೈಟಿ, ಬೆಂಗಳೂರು.
17. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

*****